# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2017-18ನೇ ಸಾಲಿನ ಆಯವ್ಯಯದಲ್ಲಿ ಸರ್ಕಾರಿ ಮೌಲಾನಾ ಆಜಾದ್ ಮಾದರಿಯ 100 ಶಾಲೆಗಳಲ್ಲಿ ಹುದ್ದೆಗಳನ್ನು ಸೃಜಿಸಿ ಭರ್ತಿ ಮಾಡಲು ಮಂಜೂರಾತಿ ನೀಡುವ ಬಗ್ಗೆ.

**ಓದಲಾಗಿದೆ:-**
1. 2017-18ನೇ ಸಾಲಿನ ಆಯವ್ಯಯ ಭಾಷಣ **ಕಂಡಿಕೆ-215**.
2. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 204 ಎಂಡಿಎಸ್ 2017 ದಿನಾಂಕ: 20.06.2017.
3. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 204 ಎಂಡಿಎಸ್ 2017 ದಿನಾಂಕ: 17.02.2018.
4. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಇವರು ಸಲ್ಲಿಸಿರುವ ಏಕಕಡತ ಪ್ರಸ್ತಾವನೆ ಸಂಖ್ಯೆ:ಅಸಂನಿ/ ಮೌಆಮಾಶಾ/ಸಿಆರ್-11/2017-18 ದಿನಾಂಕ: 23.06.2017.

*~*~*~*~*

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಸಂಖ್ಯೆ (1) ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರು 2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 215ರಲ್ಲಿ **"ಶಾಲೆಗಳಿಂದ ಹೊರ ಉಳಿದ ಅಲ್ಪಸಂಖ್ಯಾತರ ಮಕ್ಕಳನ್ನು ಮರಳಿ ಶಾಲೆಗೆ ತರಲು ಈಗಾಗಲೇ ಮುಚ್ಚಲ್ಪಟ್ಟಿರುವ ಸರ್ಕಾರಿ ಉರ್ದು ಶಾಲೆ/ಜಾಗದಲ್ಲಿ 200 ಮೌಲಾನಾ ಆಜಾದ್ ಮಾದರಿ ಶಾಲೆಗಳನ್ನು ಮುಂದಿನ 2 ವರ್ಷಗಳಲ್ಲಿ ತೆರೆಯಲಾಗುವುದು"** ಎಂದು ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ 2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಪ್ರಸಕ್ತ ಸಾಲಿನಲ್ಲಿ 200 ಮೌಲಾನಾ ಆಜಾದ್ ಮಾದರಿ ಶಾಲೆಗಳ ಪೈಕಿ 100 ಮೌಲಾನಾ ಆಜಾದ್ ಮಾದರಿ ಶಾಲೆಗಳನ್ನು 60 ಸಂಖ್ಯಾಬಲದೊಂದಿಗೆ 6ನೇ ತರಗತಿಯಿಂದ ಆಂಗ್ಲ ಮಾಧ್ಯಮದಲ್ಲಿ ಪ್ರಾರಂಭಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಸರ್ಕಾರದ ಆದೇಶದಲ್ಲಿ ಪ್ರಸಕ್ತ ಸಾಲಿನಲ್ಲಿ 100 ಸರ್ಕಾರಿ ಮೌಲಾನಾ ಆಜಾದ್ ಮಾದರಿ ಶಾಲೆಗಳನ್ನು ಮಂಜೂರಾತಿ ನೀಡಿ ಆದೇಶಿಸಲಾಗಿದ್ದು, ಆದೇಶದ ಷರತ್ತುಗಳ ಕ್ರಮ ಸಂಖ್ಯೆ:13ರಲ್ಲಿ ಮೌಲಾನಾ ಅಜಾದ್ ಮಾದರಿ ಶಾಲೆಗಳಲ್ಲಿ ಹುದ್ದೆಗಳ ಸೃಜನೆಗೆ ಸಂಬಂಧಿಸಿದಂತೆ, ಪೂರ್ಣ ಮಾಹಿತಿಯೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸೂಚಿಸಲಾಗಿದ್ದು, ಅದರಂತೆ ಮೌಲಾನಾ ಅಜಾದ್ ಮಾದರಿ ಶಾಲೆಗಳಿಗೆ ಹುದ್ದೆಗಳನ್ನು ಸೃಜಿಸಿ ಭರ್ತಿ ಮಾಡುವಂತೆ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಪತ್ರದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

...2

**<u>ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 204 ಎಂಡಿಎಸ್ 2017,ಬೆಂಗಳೂರು,ದಿನಾಂಕ:15-06-2018</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಉಲ್ಲೇಖ (3)ರ ಸರ್ಕಾರಿ ಆದೇಶವನ್ನು ಹಿಂಪಡೆಯಲಾಗಿದೆ. 2017-18ನೇ ಸಾಲಿನ ಆಯವ್ಯಯದಲ್ಲಿ ಮಂಜೂರಾದ 200 ಮೌಲಾನಾ ಆಜಾದ್ ಮಾದರಿ ಶಾಲೆಗಳ ಪೈಕಿ 100 ಸರ್ಕಾರಿ ಮೌಲಾನಾ ಆಜಾದ್ ಮಾದರಿ ಶಾಲೆಗಳನ್ನು ಪ್ರಾರಂಭಿಸಿದ್ದು, ಸದರಿ ಶಾಲೆಗಳಿಗೆ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಕೆಳಕಂಡ ಹುದ್ದೆಗಳನ್ನು ಸೃಜಿಸಿ ಭರ್ತಿ ಮಾಡಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

| ಕ್ರಮ ಸಂಖ್ಯೆ | ಪದನಾಮ | ಒಂದು ಶಾಲೆಗೆ | ಒಟ್ಟು 100 ಶಾಲೆಗೆ | ನೇಮಕಾತಿ ವಿಧಾನ |
|---|---|---|---|---|
| 1 | ಮುಖ್ಯೋಪಾಧ್ಯಾಯರು | 01 | 100 | ಅನುಬಂಧದಲ್ಲಿ ನಮೂದಿಸಿರುವಂತೆ |
| 2 | ಕನ್ನಡ ಭಾಷಾ ಶಿಕ್ಷಕರು | 01 | 100 | |
| 3 | ಆಂಗ್ಲ ಭಾಷಾ ಶಿಕ್ಷಕರು | 01 | 100 | |
| 4 | ಉರ್ದು ಭಾಷಾ ಶಿಕ್ಷಕರು | 01 | 100 | |
| 5 | ಗಣಿತ ಶಿಕ್ಷಕರು | 01 | 100 | |
| 6 | ಸಮಾಜ ವಿಜ್ಞಾನ ಶಿಕ್ಷಕರು | 01 | 100 | |
| 7 | ವಿಜ್ಞಾನ ಶಿಕ್ಷಕರ | 01 | 100 | |
| | ಒಟ್ಟು | 07 | 700 | |

ಷರತ್ತುಗಳು:-

1. ಕರ್ನಾಟಕ ಲೋಕಸೇವಾ ಆಯೋಗ/ಆಯ್ಕೆ ಪ್ರಾಧಿಕಾರ ಮೂಲಕ ಬೋಧಕ/ಬೋಧಕೇತರ ಸಿಬ್ಬಂದಿಗಳನ್ನು ನೇಮಕ ಮಾಡಲು ಕ್ರಮವಹಿಸಿ ನೇಮಕಾತಿ ನಂತರ ಮೇಲ್ವಿಚಾರಣೆಯನ್ನು ನಿರ್ದೇಶಕರು ಮಾಡತಕ್ಕದ್ದು.
2. ಪ್ರತಿ ಮೌಲಾನ ಆಜಾದ್ ಮಾದರಿ ಶಾಲೆಗಳ ಬೋಧಕ ಸಿಬ್ಬಂದಿಗಳಿಗೆ ಕಾಲಕಾಲಕ್ಕೆ ತರಬೇತಿಯನ್ನು ನೀಡತಕ್ಕದ್ದು.
3. ಕಾಲ ಕಾಲಕ್ಕೆ ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ ಒದಗಿಸಿದ ಅನುದಾನದಲ್ಲಿ ನಿರ್ವಹಣೆ ವೆಚ್ಚ, ಸಿಬ್ಬಂದಿ ವೇತನ, ಎಲ್ಲಾ ಮೂಲಭೂತ ಸೌಕರ್ಯ ನೀಡತಕ್ಕದ್ದು.
4. ಖಾಯಂ ಬೋಧಕ/ಬೋಧಕೇತರ ಸಿಬ್ಬಂದಿಗಳನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೆ ಹೊರಸಂಪನ್ಮೂಲ ಏಜೆನ್ಸಿ ಮೂಲಕ/ಅತಿಥಿ ಶಿಕ್ಷಕರನ್ನು ನಿಯಮಾನುಸಾರ ನೇಮಿಸಿಕೊಳ್ಳಲು ಕ್ರಮವಹಿಸತಕ್ಕದ್ದು.
5. ಮೇಲ್ಕಂಡ ಬೋಧಕ ಸಿಬ್ಬಂದಿಗಳ ನೇಮಕಾತಿಗೆ ಸಂಬಂಧಿಸಿದಂತೆ ಅನುಬಂಧ-1ರಲ್ಲಿ ನಿಗದಿಪಡಿಸಿರುವ ನೇಮಕಾತಿ ವಿಧಾನ, ವಯೋಮಿತಿ ಮತ್ತು ವಿದ್ಯಾರ್ಹತೆ ಹಾಗೂ ಇತರೆ ಷರತ್ತುಗಳನ್ನು ಅನುಸರಿಸತಕ್ಕದ್ದು.

...3

ಮೌಲಾನಾ ಆಜಾದ್ ಮಾದರಿ ಶಾಲೆಗಳ ಹುದ್ದೆಗಳ ನಿರ್ವಹಣೆಯನ್ನು ಲೆಕ್ಕಶೀರ್ಷಿಕೆ: 2225-03-277-2-64 (059) ನೂತನ ಹಾಸ್ಟೆಲ್‌ಗಳ ಪ್ರಾರಂಭ ಹಾಗೂ ಲೆಕ್ಕಶೀರ್ಷಿಕೆ: 4225-03-277-2-03 (386) ಅಡಿಯಲ್ಲಿ ಒದಗಿಸಲಾಗಿರುವ ಅನುದಾನದಲ್ಲಿ ಭರಿಸತಕ್ಕದ್ದು ಯಾವುದೇ ಕಾರಣಕ್ಕೂ ಹೆಚ್ಚುವರಿ ಅನುದಾನ ಕೋರತಕ್ಕದ್ದಲ್ಲ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 768 ವೆಚ್ಚ-3/2017, ದಿನಾಂಕ:17.01.2018 ರ ಸಹಮತಿಯನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**(ಅಕ್ರಂ ಭಾಷ)**
**ಸರ್ಕಾರದ ಅಧೀನ ಕಾರ್ಯದರ್ಶಿ**
**ಅಲ್ಪಸಂಖ್ಯಾತರ ಕಲ್ಯಾಣ, ಹಜ್**
**ಮತ್ತು ವಕ್ಫ್ ಇಲಾಖೆ.**

1. ಮಹಾಲೇಖಪಾಲರು, (ಅ ಮತ್ತು ಇ ಲೆಕ್ಕ ಪರಿಶೋಧನೆ-1, 2), ಕರ್ನಾಟಕ ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಕಲ್ಯಾಣ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಕೆ.ಆರ್ ವೃತ್ತ, ಬೆಂಗಳೂರು.
6. ನಿರ್ದೇಶಕರು, ಯೋಜನಾ ಇಲಾಖೆ, (ಪಿ.ಎಂ.ಐ ವಿಭಾಗ), ಬಹುಮಹಡಿ ಕಟ್ಟಡ, ಬೆಂಗಳೂರು.
7. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, 20ನೇ ಮಹಡಿ, ವಿ.ವಿ ಗೋಪುರ, ಬೆಂಗಳೂರು.
8. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಡಾ॥ ಬಿ.ಆರ್ ಅಂಬೇಡ್ಕರ್ ರಸ್ತೆ, ಬೆಂಗಳೂರು.
9. ಆಂತರಿಕ ಆರ್ಥಿಕ ಸಲಹೆಗಾರರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-3& 9 ವಿಧಾನಸೌಧ, ಬೆಂಗಳೂರು.
11. ಜಂಟಿ ನಿರ್ದೇಶಕರು, ಬೆಂಗಳೂರು ನಗರ ಜಿಲ್ಲಾ ಖಜಾನೆ, ಕಂದಾಯ ಭವನ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.